ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521
**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

**ಸಂಖ್ಯೆ: ಕವಿಪ್ರನಿನಿ/ಬಿ14/68415/2017-18** **ದಿನಾಂಕ: 12 JUN 2019**

## ಸುತ್ತೋಲೆ

**ವಿಷಯ:** ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಶುಚಿಗಾರರಿಗೆ ಸೌಲಭ್ಯಗಳನ್ನು ಒದಗಿಸುವ ಬಗ್ಗೆ.

**ಉಲ್ಲೇಖ:**
1. ದಿನಾಂಕ: 07.03.2019 ರಂದು ಅರೆಕಾಲಿಕ ಶುಚಿಗಾರರ (ಸ್ವಚ್ಛತಾ ಕೆಲಸಗಾರರು) ಸಮಸ್ಯೆಗಳ ಕುರಿತು ಶ್ರೀ.ಜಗದೀಶ್ ಹಿರೇಮನಿ, ಗೌರವಾನ್ವಿತ ಸದಸ್ಯರು, National Commission for Safai Karamcharis, Ministry of Social Justice & Empowerment, ಭಾರತ ಸರ್ಕಾರ, ನವದೆಹಲಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.
2. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ14/68415/2017-18, ದಿನಾಂಕ: 02.05.2019.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ.ಜಗದೀಶ್ ಹಿರೇಮನಿ, ಗೌರವಾನ್ವಿತ ಸದಸ್ಯರು, National Commission for Safai Karamcharis, Ministry of Social Justice & Empowerment, ಭಾರತ ಸರ್ಕಾರ, ನವದೆಹಲಿ ಇವರು ದಿನಾಂಕ: 07.03.2019 ರಂದು ನಿಗಮ ಕಾರ್ಯಾಲಯಕ್ಕೆ ಭೇಟಿ ನೀಡಿ ಕವಿಪ್ರನಿನಿ/ಎಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಶುಚಿಗಾರರ ಸಮಸ್ಯೆಗಳ ಕುರಿತು ಸಭೆ ನಡೆಸಿ ಕೆಲವು ಸಲಹೆ ಸೂಚನೆಗಳನ್ನು ನೀಡಿದ್ದರು. ಇದರ ಪ್ರಕಾರ ಉಲ್ಲೇಖ-2 ರಲ್ಲಿನ ನಿಗಮದ ಆದೇಶದಲ್ಲಿ ಅರೆಕಾಲಿಕ ಶುಚಿಗಾರರ ಮಾಸಿಕ ಸಂಭಾವನೆಯನ್ನು ರೂ.10,000/-ಗಳಿಂದ ರೂ.16,370/- ಕ್ಕೆ ಪರಿಷ್ಕರಿಸಿ ಆದೇಶಿಸಲಾಗಿದೆ.

ಮುಂದುವರೆದು, ಸದರಿ ಸಭೆಯಲ್ಲಿ ಕವಿಪ್ರನಿನಿ/ಎಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಶುಚಿಗಾರರಿಗೆ ಕೆಲವು ಸೌಲಭ್ಯಗಳನ್ನು ಒದಗಿಸುವಂತೆ ತೀರ್ಮಾನಿಸಿರುವ ಹಿನ್ನಲೆಯಲ್ಲಿ, ಸಕ್ಷಮ ಪ್ರಾಧಿಕಾರಿಗಳು ಈ ಕೆಳಗಿನಂತೆ ಕ್ರಮವಹಿಸಲು ಸೂಚಿಸಿದೆ:-

1. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ/ಎಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಶುಚಿಗಾರರಿಗೆ ಕಡ್ಡಾಯವಾಗಿ ಪಿ.ಎಫ್, ಇ.ಎಸ್.ಐ, ಯನ್ನು ಪಾವತಿ ಮಾಡಿ, ಪಾವತಿಸಿರುವ ಬಗ್ಗೆ ಪ್ರತಿ ತಿಂಗಳು ವೇತನ ಪ್ರಮಾಣ ಪತ್ರದಲ್ಲಿ ನಮೂದಿಸಿ ಅವುಗಳನ್ನು ಅರೆಕಾಲಿಕ ಶುಚಿಗಾರರಿಗೆ ನೀಡಲು ಕ್ರಮವಹಿಸುವುದು.

2. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ/ಎಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಶುಚಿಗಾರರು ಸ್ವಚ್ಛತಾ ಕೆಲಸವನ್ನು ನಿರ್ವಹಿಸುತ್ತಿರುವ ಸಮಯದಲ್ಲಿ ಕಡ್ಡಾಯವಾಗಿ ಸುರಕ್ಷತಾ ಪರಿಕರಗಳನ್ನು ತೊಟ್ಟು ಕಾರ್ಯನಿರ್ವಹಿಸುವಂತೆ ಕ್ರಮವಹಿಸುವುದು.

3. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ/ಎಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಶುಚಿಗಾರರಿಗೆ ಪ್ರತಿ 6 ತಿಂಗಳಿಗೊಮ್ಮೆ ನುರಿತ ವೈದ್ಯರಿಂದ ಆರೋಗ್ಯ ತಪಾಸಣೆಯನ್ನು ಮಾಡಿಸಲು ಕ್ರಮವಹಿಸುವುದು.

4. ಎಂ.ಎಸ್.ಕಾಯ್ದೆ, 2013 ರ ಪ್ರಕಾರ ಯಾವುದೇ ಅರೆಕಾಲಿಕ ಶುಚಿಗಾರರನ್ನು ಡ್ರೈನೇಜ್, ತೆರೆದ ಚರಂಡಿ/ಮ್ಯಾನ್ ಹೋಲ್ ಸ್ವಚ್ಛಗೊಳಿಸಲು ನಿಯೋಜನೆ ಮಾಡುವುದನ್ನು ಆಕ್ಟ್‌ನ ಪ್ರಕಾರ ನಿಷೇಧಿಸಿರುವುದರಿಂದ ಇದನ್ನು ಕಟ್ಟು ನಿಟ್ಟಾಗಿ ಪಾಲಿಸುವುದು.

ಅರೆಕಾಲಿಕ ಶುಚಿಗಾರರ ಮಾಸಿಕ ಸಂಭಾವನೆಯನ್ನು ₹16,370/–ಕ್ಕೆ ಪರಿಷ್ಕರಿಸಿರುವುದರಿಂದ, ನಿಗಮವು ವಹಿಸುವ ಹೆಚ್ಚಿನ ವೇಳೆಯ ಕೆಲಸವನ್ನು ನಿರ್ವಹಿಸಲು ಸೂಚಿಸಿದೆ.

Gopalk
ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಪ್ರತಿಯನ್ನು ಮಾಹಿತಿಗಾಗಿ:-

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ.
3. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂ.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂ.
5. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/(ಹಣಕಾಸು)/(ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು.

ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ **www.kptcl.com/eprasarana** ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ

6. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)/ನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
7. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಉಪಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
8. ಎಲ್ಲಾ ಲೆಕ್ಕಾಧಿಕಾರಿ, ಕವಿಪ್ರನಿನಿ/ಎಸ್ಕಾಂ.

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-

1. ಶ್ರೀ.ರಾಮಕೃಷ್ಣಯ್ಯ.ಟಿ.ಆರ್, ಅಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು ಎಲ್ಲಾ ಎಸ್ಕಾಂಗಳು.
2. ಶ್ರೀ.ಎ.ಎನ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜಿನಿಯರ್‌ಗಳ ಸಂಘ, ಬೆಂಗಳೂರು ಮತ್ತು ನಿರ್ದೇಶಕರು ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜಿನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಧಿಕಾರಿಗಳ ಸಂಘ, ಬೆಂಗಳೂರು.